**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **643** |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ. ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | **19-09-2022** |
| 4) | ಉತ್ತರಿಸುವವರು | ಮಾನ್ಯ ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ-ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಪ್ರಶ್ನೆ | ಉತ್ತರ |
|---|---|
| (ಅ) ಲೋಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ವಿಸರ್ಜಿತ ಕರ್ನಾಟಕ ರಾಜ್ಯ ವಯಸ್ಕರ ಶಿಕ್ಷಣ ಸಮಿತಿ ವತಿಯಿಂದ ನಡೆಯುತ್ತಿದ್ದ ವಿದ್ಯಾಪೀಠಗಳನ್ನು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗೆ ವರ್ಗಾಯಿಸಿರುವುದು ನಿಜವೇ; | ಹೌದು. |
| (ಆ) ಹಾಗಿದ್ದಲ್ಲಿ, ರಾಜ್ಯ ವಯಸ್ಕರ ಶಿಕ್ಷಣ ಸಮಿತಿ ವತಿಯಿಂದ ನಡೆಯುತ್ತಿದ್ದ ಕಾರ್ಯಕ್ರಮಗಳನ್ನು ಕೌಶಲ್ಯಾಭಿವೃದ್ಧಿ ಇಲಾಖೆ ಮೂಲಕ ಮುಂದುವರೆಸಲಾಗುವುದೇ ಹಾಗೂ ರಾಜ್ಯ ವಯಸ್ಕರ ಶಿಕ್ಷಣ ಸಮಿತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ 36 ಸಿಬ್ಬಂದಿಗಳಿಗೆ ಕೌಶಲ್ಯಾಭಿವೃದ್ಧಿ ಇಲಾಖೆಯಲ್ಲಿ ಉದ್ಯೋಗ ಭದ್ರತೆ ಒದಗಿಸಲಾಗುವುದೇ; | ಸರ್ಕಾರದ ಆದೇಶ ಸಂಖ್ಯೆ:ಇಡಿ 103 ಪಿಟಿಐ 2017, ಬೆಂಗಳೂರು ದಿನಾಂಕ:11.09.2017 ರಂತೆ ಲೋಕಶಿಕ್ಷಣ ಇಲಾಖೆಯ ಅಧೀನದಲ್ಲಿದ್ದ 16 ವಿದ್ಯಾಪೀಠಗಳ ಸ್ಥಿರ ಮತ್ತು ಚರಾಸ್ತಿ ಹಾಗೂ ವಿಸರ್ಜಿತ ವಯಸ್ಕರ ಶಿಕ್ಷಣ ಸಮಿತಿಯ 36 ಸಿಬ್ಬಂದಿಗಳನ್ನು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗೆ ವರ್ಗಾಯಿಸಲಾಗಿದೆಯೇ ವಿನ: ಯೋಜನೆಗಳನ್ನು ವರ್ಗಾಯಿಸಿರುವುದಿಲ್ಲ. ಈ ರೀತಿ ವರ್ಗಾಯಿತ 36 ಸಿಬ್ಬಂದಿಗಳಿಗೆ ಕೌಶಲ್ಯಾಭಿವೃದ್ಧಿ ಇಲಾಖೆಯಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾನುಸಾರ ವೇತನ/ನಿವೃತ್ತಿ ವೇತನ ಮತ್ತಿತರ ಭತ್ಯೆಗಳನ್ನು ಒದಗಿಸಲಾಗುತ್ತಿದೆ. |
| (ಇ) ವಯಸ್ಕರ ಶಿಕ್ಷಣ ಸಮಿತಿ ಅಧೀನದಲ್ಲಿದ್ದ 16 ವಿದ್ಯಾಪೀಠಗಳ 700 ಎಕರೆ ಜಮೀನು ಕೌಶಲ್ಯಾಭಿವೃದ್ಧಿ ಇಲಾಖೆಯ ಅಧೀನಕ್ಕೆ ಬಂದ ತರುವಾಯ ಭೇಟಿ ನೀಡಿದ ವಿದೇಶಿ ತಜ್ಞರ ಮಾಹಿತಿ ಒದಗಿಸುವುದು ಹಾಗೂ 16 ವಿದ್ಯಾಪೀಠಗಳ ಅಭಿವೃದ್ಧಿಗೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು? | ವಯಸ್ಕರ ಶಿಕ್ಷಣ ಸಮಿತಿ ಅಧೀನದಲ್ಲಿದ್ದ 16 ವಿದ್ಯಾಪೀಠಗಳ 700 ಎಕರೆ ಜಮೀನು ಕೌಶಲ್ಯಾಭಿವೃದ್ಧಿ ಇಲಾಖೆಯ ಅಧೀನಕ್ಕೆ ಬಂದ ತರುವಾಯ ಯಾವುದೇ ವಿದೇಶಿ ತಜ್ಞರು ಭೇಟಿ ನೀಡಿರುವುದಿಲ್ಲ. ಈ 16 ವಿದ್ಯಾಪೀಠಗಳ ಆಸ್ತಿ ಸಂರಕ್ಷಣೆಗಾಗಿ ಕಾಂಪೌಂಡ್ ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಕೌಉಜೀಇ 20 ಕೌಗುಪ್ರ 2022**

(ಡಾ॥ ಸಿ.ಎನ್. ಅಶ್ವಥ್‌ನಾರಾಯಣ)
ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ-ಬಿಟಿ ಮತ್ತು
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಇಲಾಖಾ ಸಚಿವರು.